# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಿಲ್ಲಾ ಚುನಾವಣಾಧಿಕಾರಿ-ಬೆಂಗಳೂರು ಹಾಗೂ ಮುಖ್ಯ ಆಯುಕ್ತರು ರವರ ಕಚೇರಿ, ಎನ್.ಆರ್.ಚೌಕ, ಬೆಂಗಳೂರು-560 002.

ಇ-ಮೇಲ್: deo.bbmp@gmail.com 080-22975564


ಸಂಖ್ಯೆ: ಇಎಲ್‌ಎನ್/ಕೇಂದ್ರ/ಪಿಆರ್/94/2022-23 ದಿನಾಂಕ:27.12.2022.

ವಿಷಯ:- 2022-23ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಸಂಬಂಧಿಸಿದ 28 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಗುರುತಿನ ಚೀಟಿ ಮತ್ತು ಆಧಾರ್ ಲಿಂಕ್ ಆನ್ ಲೈನ್ VHA (Voter Helpline App) ಮುಖೇನಾ ಮಾಡಲು ಮತ್ತು ಮತದಾರರಲ್ಲಿ ಮತದಾನದ ಅರಿವು ಮೂಡಿಸುವ ಕುರಿತು ನೀಡಲಾದ ಅನುಮತಿ ಪತ್ರವನ್ನು ದುರುಪಯೋಗ ಪಡಿಸಿಕೊಂಡಿರುವುದರಿಂದ ಮೆಃಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸುವ ಬಗ್ಗೆ.

ಉಲ್ಲೇಖ:-
1. ಇಎಲ್‌ಎನ್/ಕೇಂದ್ರ/ಪಿಆರ್/94/2022-23, ದಿನಾಂಕ: 20.08.2022.
2. ಸಮನ್ವಯ ಟ್ರಸ್ಟ್ ರವರ ದೂರಿನ ಪತ್ರದ ದಿನಾಂಕ:20.09.2022.
3. ಇಎಲ್‌ಎನ್/ಕೇಂದ್ರ/ಪಿಆರ್/488/2022-23, ದಿನಾಂಕ: 02-11-2022.
4. ಇಎಲ್‌ಎನ್/ಕೇಂದ್ರ/ಪಿಆರ್/94/2022-23, ದಿನಾಂಕ:07-12-2022

** ** **

**ಪ್ರಸ್ತಾವನೆ:-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸಂಬಂಧಿಸಿದ 28 ವಿಧಾನಸಭಾ ಕ್ಷೇತ್ರಗಳಲ್ಲಿ ಬರುವ ಪ್ರತಿಯೊಂದು ಮತಗಟ್ಟೆ ವ್ಯಾಪ್ತಿಗೆ ಭೇಟಿ ಮಾಡಿ ಮತದಾರರಿಗೆ ಮತದಾನದ ಬಗ್ಗೆ ಹಾಗೂ ಹೊಸದಾಗಿ ಮತದಾರರನ್ನು ನೊಂದಣಿ ಮಾಡಿಕೊಳ್ಳುವ ಬಗ್ಗೆ ಭಾರತ ಚುನಾವಣಾ ಆಯೋಗರವರು ಆಯೋಜಿಸಿರುವ ರಾಜ್ಯದ ಮತದಾರರ ಗುರುತಿನ ಚೀಟಿ ಸಂಖ್ಯೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡಲು ತಿಳಿಸಿದ್ದು, ಮತದಾರರು ಮೆಃಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರು ಹಾಗೂ ಕುಟುಂಬದ ಆಧಾರ್ ಕಾರ್ಡ್‌ಗಳ ನಂಬರ್‌ಗಳನ್ನು Voter Helpline App ಮತ್ತು Garuda App ಮೂಲಕ ಲಿಂಕ್ ಮಾಡುವ ಜಾಗೃತಿ ಕಾರ್ಯಕ್ಕೆ ತಮ್ಮ ಸಂಸ್ಥೆಯ ಸದಸ್ಯರು ಸ್ವಯಂ ಆಸಕ್ತಿಯನ್ನು ಹೊಂದಿರುತ್ತೀರಿ ಎಂದು ಮನವಿ ಪತ್ರ ಸಲ್ಲಿಸಿರುತ್ತೀರಿ. ಸದರಿ ಸಂಸ್ಥೆಗೆ ಬಿಬಿಎಂಪಿ ವ್ಯಾಪ್ತಿಗೆ ಸಂಬಂಧಿಸಿದ 28 ವಿಧಾನಸಭಾ ಕ್ಷೇತ್ರಗಳಲ್ಲಿ ಬಿ.ಎಲ್.ಒ., ಗಳೊಂದಿಗೆ ಮತದಾರರ ನೊಂದಣಾಧಿಕಾರಿಗಳ ಸಹಯೋಗದೊಂದಿಗೆ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡುವ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಯಶಸ್ವಿಯಾಗಿ ಷರತ್ತುಗಳೊಂದಿಗೆ ಉಚಿತವಾಗಿ ನಿರ್ವಹಿಸಲು ಉಲ್ಲೇಖ (1)ರ ರೀತ್ಯಾ ಅನುಮತಿ ಪತ್ರವನ್ನು ನೀಡಲಾಗಿರುತ್ತದೆ.

1) ಈ ಮಧ್ಯ ಉಲ್ಲೇಖ (2)ರ ದೂರಿನಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಮಾಹಿತಿ ಸಂಗ್ರಹಣೆ ಬಗ್ಗೆ ಸಮನ್ವಯ ಟ್ರಸ್ಟ್ (ರಿ) ರವರು ಮೆಃಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ವಿರುದ್ಧ ದೂರು ನೀಡಿದ್ದರ ಹಿನ್ನಲೆಯಲ್ಲಿ SVEEP ನೋಡಲ್ ಅಧಿಕಾರಿ ಹಾಗೂ ಉಪ ಆಯುಕ್ತರು (ಮಾರುಕಟ್ಟೆ) ರವರ ವರದಿಯನ್ನು ಕೋರಲಾಗಿತ್ತು.

SVEEP ನೋಡಲ್ ಅಧಿಕಾರಿಯವರು ಸದರಿ ಸಂಸ್ಥೆಯ ವಿರುದ್ಧ ಸಲ್ಲಿಸಿರುವ ದೂರಿನ ಬಗ್ಗೆ ದಿನಾಂಕ: 22-09-2022ರಂದು ಕಾರಣ ಕೇಳಿ ಪತ್ರ ನೀಡಿ, ದಿನಾಂಕ:24-09-2022 ರಲ್ಲಿ ಮೆಃಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ

ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರಿಂದ ಸ್ಪಷ್ಟೀಕರಣವನ್ನು ಪಡೆದುಕೊಂಡು, ಪರಿಶೀಲಿಸಿ "ಸದರಿ ಸಂಸ್ಥೆರವರು ಬಿಬಿಎಂಪಿ ಗುರುತಿನ ಚೀಟಿ ಸೃಷ್ಟಿಸಿಕೊಂಡು ಅನುಮತಿ ಪತ್ರದಲ್ಲಿರುವ ಷರತ್ತು ಮತ್ತು ನಿಬಂಧನೆಗಳನ್ನು ಸ್ಪಷ್ಟವಾಗಿ ಉಲ್ಲಂಘನೆ ಮಾಡಿರುವುದರಿಂದ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಕಡತವನ್ನು ಸಲ್ಲಿಸಿದೆ" ಎಂದು ವರದಿ ನೀಡಿರುತ್ತಾರೆ.

SVEEP ನೋಡಲ್ ಅಧಿಕಾರಿಯ ವರದಿಯ ಆಧಾರದ ಮೇಲೆ ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರಿಗೆ ದಿನಾಂಕ:20-08-2022ರಂದು ನೀಡಲಾಗಿದ್ದ ಅನುಮತಿ ಪತ್ರದಲ್ಲಿನ ಷರತ್ತುಗಳನ್ನು ಉಲ್ಲಂಘಿಸಿರುವುದರಿಂದ, ಉಲ್ಲೇಖ-(3)ರಂತೆ ನೀಡಲಾಗಿದ್ದ ಅನುಮತಿಯನ್ನು ದಿನಾಂಕ:02-11-2022ರಂದು ರದ್ದುಪಡಿಸಲಾಗಿರುತ್ತದೆ.

2) ದಿನಾಂಕ:10-11-2022ರಂದು ಮಾನ್ಯ ಚುನಾವಣಾಧಿಕಾರಿ ಕಛೇರಿಯಿಂದ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಯೆಂದು ಗುರುತಿನ ಚೀಟಿ ಬಳಸುತ್ತಿರುವ ಕುರಿತು ಕ್ರಮವಹಿಸಿ ವರದಿ ನೀಡಲು ಪತ್ರ ಬಂದಿರುತ್ತದೆ.

ಈ ಸಂಬಂಧ ಮಹದೇವಪುರ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳು, ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರತಿನಿಧಿಗಳು ಮತಗಟ್ಟೆ ಮಟ್ಟದ ಸಮನ್ವಯ ಅಧಿಕಾರಿ ಎಂದು ನೀಡಲಾಗಿರುವ ಗುರುತಿನ ಚೀಟಿಯನ್ನು ಮತಗಟ್ಟೆ ಮಟ್ಟದ ಅಧಿಕಾರಿ ಎಂದು ತಿದ್ದುಪಡಿ ಮಾಡಿಕೊಂಡು ಕಂದಾಯ ಪರಿವೀಕ್ಷಕರು ಮತ್ತು ಕಂದಾಯ ವಸೂಲಿಗಾರರೊಂದಿಗೆ ಸಮನ್ವಯ ಸಾಧಿಸದೆ ಮನೆ ಮನೆಗೆ ತೆರಳಿ ಕಾರ್ಯ ನಿರ್ವಹಿಸುತ್ತಿರುವ ಕುರಿತು ಪೊಲೀಸ್ ಠಾಣೆಯಲ್ಲಿ ದಿನಾಂಕ:15-11-2022ರಂದು ಮೊಕದಮ್ಮೆ ದಾಖಲಿಸಿದ್ದು, ಕಾಡುಗೋಡಿ ಪೊಲೀಸ್ ಠಾಣೆಯ ಅಪರಾಧ ಸಂಖ್ಯೆ:0217/2022, ದಿನಾಂಕ: 17-11-2022 ಆಗಿರುತ್ತದೆ.

ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ರವರು ದಿನಾಂಕ:17-11-2022ರಂದು ಮೆ॥ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯು ಚುನಾವಣೆಗೆ ಸಂಬಂಧಿಸಿದಂತೆ ಖಾಸಗಿ ಮಾಹಿತಿಯನ್ನು ಸಂಗ್ರಹಿಸದ್ದಾರೆಯೇ ಎಂಬುದರ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ತನಿಖೆ ನಡೆಸುವುದು ಸಮಂಜಸವಾಗಿರುತ್ತದೆ ಎಂದು ವರದಿ ಸಲ್ಲಿಸಿದ್ದರ ಹಿನ್ನಲೆಯಲ್ಲಿ ಅದೇ ದಿನ ಮತಗಟ್ಟೆ ಮಟ್ಟದ ಅಧಿಕಾರಿಗಳ ಗುರುತಿನ ಚೀಟಿಯನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ಭಾರತೀಯ ದಂಡ ಸಂಹಿತೆ ಪ್ರಕಾರ Impersonation and breach of trust ಅಪರಾಧವೆಂದು ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದ್ದು, ಅಪರಾಧ ಸಂಖ್ಯೆ:0276/2022, ದಿನಾಂಕ:17-11-2022 ಆಗಿರುತ್ತದೆ.

3) ಮುದ್ರಣ ಮಾಧ್ಯಮ ಮತ್ತು ಸುದ್ದಿ ಮಾಧ್ಯಮಗಳಲ್ಲಿ ರಾಜಕೀಯ ಪಕ್ಷದ ಅಭ್ಯರ್ಥಿಯಾದ ಶ್ರೀಯುತ.ನಂದೀಶ್ ರೆಡ್ಡಿ, ಕೆ.ಆರ್.ಪುರಂ(2018-ವಿಧಾನಸಭಾ ಕ್ಷೇತ್ರ)ರವರಿಂದ ದೇಣಿಗೆಯಾಗಿ ಸುಮಾರು ರೂ.17.50 ಲಕ್ಷಗಳಷ್ಟು ಮೊತ್ತವನ್ನು ಪಡೆದುಕೊಂಡಿರುವುದು ವರದಿಯಾದ ಹಿನ್ನಲೆಯಲ್ಲಿ ಭಾರತ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಹುಡುಕಲಾಗಿ ಅವರು ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ದಾಖಲಿಸಿರುವುದು ಕಂಡು ಬಂದಿರುತ್ತದೆ.

ಮೇಲಿನ ಅಂಶಗಳಲ್ಲಿ ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರು ಅನುಮತಿ ಪತ್ರದಲ್ಲಿನ ಷರತ್ತುಗಳಿಗೆ ವ್ಯತಿರಿಕ್ತವಾಗಿ ಗುರುತಿನ ಚೀಟಿಯನ್ನು ಸೃಷ್ಟಿಸಿಕೊಂಡು ನೈಜ ಬಿ.ಎಲ್.ಓ ಗಳೆಂದು ಬಿಂಬಿಸಿಕೊಂಡು/ಸೋಗುಹಾಕಿ ಸಾರ್ವಜನಿಕರನ್ನು ಮೋಸಗೊಳಿಸಿರುತ್ತೀರಿ ಹಾಗೂ ರಾಜಕೀಯ ಪಕ್ಷದವರಿಂದ ದೇಣಿಗೆ ಪಡೆದು, ಪಾಲಿಕೆಯ ಅನುಮತಿ ಪತ್ರದಲ್ಲಿನ ಷರತ್ತುಗಳನ್ನು ಉಲ್ಲಂಘಿಸಿ ವಂಚನೆಯನ್ನು ಮಾಡಿರುವುದು ಕಂಡುಬಂದಿರುವುದರಿಂದ ಉಲ್ಲೇಖ-4ರಂತೆ ಸದರಿ ಸಂಸ್ಥೆಯಾಗಲೀ ಅಥವಾ ಸದರಿ ಸಂಸ್ಥೆಯಲ್ಲಿನ ನಿರ್ದೇಶಕರಿಂದ ನಡೆಸಲ್ಪಡುತ್ತಿರುವ ಇತರೆ ಯಾವುದೇ ಸಂಸ್ಥೆಗೆ ಪಾಲಿಕೆ ವತಿಯಿಂದ ಉಚಿತವಾದ ಕಾರ್ಯಕ್ರಮಗಳಿಗೆ ಅನುಮತಿ ಮತ್ತು ಪಾಲಿಕೆಯು ಪಡೆದುಕೊಳ್ಳಲು ಸೇವೆ ಮತ್ತು ಸಂಗ್ರಹಣೆ (Service & Procurement) ಟೆಂಡರ್‌ಗಳಲ್ಲಿ ಭಾಗವಹಿಸುವಿಕೆಗೆ

ಹಾಗೂ ಇನ್ನಿತರೆ ಯಾವುದೇ ಕಾರ್ಯಕ್ರಮಗಳಿಗೆ ಅವಕಾಶ ನೀಡದಿರಲು ನಿರ್ಧರಿಸಿ ನಿರ್ಬಂಧವನ್ನು ಹೇರಿ ಏಕೆ ಮೆ॥ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರನ್ನು ಕಪ್ಪು ಪಟ್ಟಿಗೆ ಸೇರಿಸಬಾರದು ಎಂಬ ಬಗ್ಗೆ ನೋಟೀಸ್ ತಲುಪಿದ 3 ದಿನಗಳೊಳಗಾಗಿ ಸಮಜಾಯಿಷಿ ನೀಡಲು ತಿಳಿಸಲಾಗಿರುತ್ತದೆ. ಆದರೆ ತಹಲ್‌ವರೆವಿಗೂ ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರಿಂದ ನೋಟೀಸ್‌ಗೆ ಸಂಬಂಧಿಸಿದಂತೆ ಯಾವುದೇ ಸಮಜಾಯಿಷಿ ನೀಡಿರುವುದಿಲ್ಲವಾದ್ದರಿಂದ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿರುತ್ತದೆ.

## "ಆದೇಶ"

ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆರವರು ಅನುಮತಿ ಪತ್ರದಲ್ಲಿನ ಷರತ್ತುಗಳಿಗೆ ವ್ಯತಿರಿಕ್ತವಾಗಿ ಗುರುತಿನ ಚೀಟಿಯನ್ನು ಸೃಷ್ಟಿಸಿಕೊಂಡು ನೈಜ ಬಿ.ಎಲ್.ಓ ಗಳೆಂದು ಬಿಂಬಿಸಿಕೊಂಡು/ಸೋಗುಹಾಕಿ ಸಾರ್ವಜನಿಕರನ್ನು ಮೋಸಗೊಳಿಸಿರುವುದು ದಾಖಲೆ ಹಾಗೂ ವರದಿಗಳಿಂದ ದೃಢಪಟ್ಟಿರುವುದರಿಂದ, ಸದರಿ ಸಂಸ್ಥೆಯಾಗಲೀ, ಸಂಸ್ಥೆಯಲ್ಲಿನ ನಿರ್ದೇಶಕರಿಂದ ಅಥವಾ ಸದರಿ ಸಂಸ್ಥೆಯ ನಿರ್ದೇಶಕರುಗಳು ಸಹಭಾಗಿಯಾಗಿ ನಡೆಸಲ್ಪಡುತ್ತಿರುವ ಇತರೇ ಯಾವುದೇ ಸಂಸ್ಥೆಗೆ ಪಾಲಿಕೆ ವತಿಯಿಂದ ಉಚಿತ ಕಾರ್ಯಕ್ರಮಗಳಿಗೆ ಅನುಮತಿ ಮತ್ತು ಪಾಲಿಕೆಯು ಪಡೆದುಕೊಳ್ಳಲು ಸೇವೆ ಮತ್ತು ಸಂಗ್ರಹಣೆ (**Service & Procurement**) ಟೆಂಡರ್‌ಗಳಲ್ಲಿ ಭಾಗವಹಿಸುವಿಕೆಗೆ ಹಾಗೂ ಇನ್ನಿತರೆ ಯಾವುದೇ ಕಾರ್ಯಕ್ರಮಗಳಿಗೆ ಅವಕಾಶ ನೀಡದಂತೆ ನಿರ್ಬಂಧವನ್ನು ವಿಧಿಸಿ, ಸದರಿ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸಲಾಗಿದೆ".

ಸಹಿ/-
ಜಿಲ್ಲಾ ಚುನಾವಣಾಧಿಕಾರಿ-ಬೆಂಗಳೂರು
ಹಾಗೂ ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು

ರವರಿಗೆ,

ಮೆ॥ ಚಿಲುಮೆ ಶೈಕ್ಷಣಿಕ ಸಾಂಸ್ಕೃತಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆ,
ನಂ.261/1, 17ನೇ ಕ್ರಾಸ್, ನೆಲಮಹಡಿ,
ಶೇಖರ್ ನರ್ಸಿಂಗ್ ಹೋಂ ಹಿಂಭಾಗ, ಮಲ್ಲೇಶ್ವರಂ,
ಬೆಂಗಳೂರು-560 003.

ಪ್ರತಿಯನ್ನು:-

1. ಮಾನ್ಯ ಮುಖ್ಯ ಚುನಾವಣಾಧಿಕಾರಿ-ಕರ್ನಾಟಕ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
3. ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ ವಿಕಾಸ ಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ವಲಯ ಆಯುಕ್ತರುಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಎಲ್ಲಾ ವಿಶೇಷ ಆಯುಕ್ತರುಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಅಪರ ಜಿಲ್ಲಾ ಚುನಾವಣಾಧಿಕಾರಿಗಳು (ಕೇಂದ್ರ, ಉತ್ತರ, ದಕ್ಷಿಣ ಮತ್ತು ಬೆಂಗಳೂರು ನಗರ) ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
7. ಎಲ್ಲಾ 8 ವಲಯಗಳ ಜಂಟಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
8. 28 ವಿಧಾನಸಭಾ ಕ್ಷೇತ್ರದ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳು, ಬಿಬಿಎಂಪಿ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಕಡತಕ್ಕೆ.

27.12.22

ಜಿಲ್ಲಾ ಚುನಾವಣಾಧಿಕಾರಿ-ಬೆಂಗಳೂರು
ಹಾಗೂ ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು